<u>ಸಿವಿಲ್ ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ,</u>

<u>ಹಗರಿಬೊಮ್ಮನಹಳ್ಳಿ</u>

ಸಿ ಸಿ ನಂ. ೮೩೬/2015

<u>ಸಾಕ್ಷಿಗೆ ದಿನಾಂಕ 23-08-2024 ರಂದು ಪ್ರಮಾಣ ವಚನ ಭೋದಿಸಲಾಯಿತು.</u>

C.W.: 6 P.W.: 4

| | | |
|---|---|---|
| ಹೆಸರು | ಃ | ಖಾಜಾಹುಸೇನ್ |
| ತಂದೆಯ ಹೆಸರು | ಃ | ಮೋದಿನ್ ಸಾಬ್ |
| ವಯಸ್ಸು | ಃ | 42 ವರ್ಷ |
| ಉದ್ಯೋಗ | ಃ | ಚಿಕನ್ ವ್ಯಾಪಾರ |
| ವಾಸ ಸ್ಥಳ | ಃ | ಹೂವಿನ ಹಡಗಲಿ |

<u>ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-</u>

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಈಗ್ಗೆ ೮-೯ ವರ್ಷದ ಹಿಂದೆ ನಾನು ಹಡಗಲಿಯಿಂದ ಕೊಟ್ಟೂರಿಗೆ ಹೋಗುತ್ತಿದ್ದಾಗ ಮಾರ್ಗ ಮಧ್ಯದಲ್ಲಿ ಪೊಲೀಸರು ನನ್ನ ವಾಹನವನ್ನು ನಿಲ್ಲಿಸಿ ಒಂದು ದಾಖಲೆಗೆ ನನ್ನ ಸಹಿಯನ್ನು ಪಡೆದಿರುತ್ತಾರೆ. ಸಾಕ್ಷಿಗೆ ನಿಪಿ-೫ ಘಟನಾ ಸ್ಥಳದ ಪಂಚನಾಮೆಯನ್ನು ತೋರಿಸಲಾಗಿ, ಸಾಕ್ಷಿಯು ಸದರಿ ದಾಖಲೆಯಲ್ಲಿ ತನ್ನ ಸಹಿ ಇದೆ ಅಂತಾ ನೋಡಿ ಗುರುತಿಸಿದ್ದು ಅದನ್ನು ನಿಪಿ-೫ ಬಿ ಎಂದು ಗುರುತಿಸಲಾಯಿತು. ಸದರಿ ದಾಖಲೆಯಲ್ಲಿ ಏನು ಬರೆದಿರುತ್ತಾರೆನ್ನುವ ವಿಚಾರ ನನಗೆ ಗೊತ್ತಿಲ್ಲ. ಪೊಲೀಸರು ಸಹಿ ಮಾಡು ಅಂದ ಮೇರೆಗೆ ನಾನು ಸದರಿ ದಾಖಲೆಗೆ ಸಹಿ ಮಾಡಿರುತ್ತೇನೆ. ಸದರಿ ದಾಖಲೆಗೆ ನನ್ನ ಜೊತೆ ಚಾಸಾ-7 ರವರು ಸಹಾ ಸಹಿ ಮಾಡಿರುತ್ತಾರೆ. ನಿಪಿ-೨ ಮತ್ತು ೩ ರ ಪೋಟೋಗಳನ್ನು ಸಾಕ್ಷಿಗೆ ತೋರಿಸಲಾಗಿ, ಸಾಕ್ಷಿಯು ಅದರಲ್ಲಿ ತಾನಿರುವುದಾಗಿ ಒಪ್ಪಿಕೊಂಡಿರುತ್ತಾರೆ. ಸದರಿ ಪೋಟೋಗಳನ್ನು ಪೋಲೀಸರು ಯಾವ ಕಾರಣಕ್ಕಾಗಿ ಪಡೆದುಕೊಂಡಿರುತ್ತಾರೆನ್ನುವುದು ನನಗೆ ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ವಾಹನವನ್ನು ಅಮಾನತುಪಡಿಸಿಕೊಂಡಿರುವುದಿಲ್ಲ.

(ಸಹಾಯಕ ಸರ್ಕಾರಿ ಅಭಿಯೋಜಕರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಲು ಕೇಳಿಕೊಂಡಿದ್ದು ಅನುಮತಿ ನೀಡಲಾಯಿತು.)

<u>ಪಾಟೀ ಸವಾಲುಃ ಸ. ಸ. ಅಭಿಯೋಜಕರವರಿಂದಃ-</u>

ದಿಃ 22-04-2015 ರಂದು ಇಟಗಿ ಪೋಲೀಸರು ಬೆಳಿಗ್ಗೆ 10.45 ರಿಂದ 11.45 ರವರೆಗೆ ಘಟನಾ ಸ್ಥಳದಲ್ಲಿ ನನ್ನ ಮತ್ತು ಚಾಸಾ-7 ರವರ ಸಮಕ್ಷಮ ನಿಪಿ-5 ರಂತೆ ಪಂಚಾನಮೆಯನ್ನು

ಜರುಗಿಸಿ ಘಟನಾ ಸ್ಥಳದಲ್ಲಿ ಇದ್ದಂತಹ ಮಹೀಂದ್ರಾ ಬೋಲೇರೋ ಪಿಕಪ್ ವಾಹನ ನಂ. ಕೆಎ-35, ಬಿ-3064 ನೇದ್ದನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ನಿಪಿ-5 ರಲ್ಲಿರುವಂತಹ ಸಂಪೂರ್ಣ ವಿಚಾರವನ್ನು ತಿಳಿದುಕೊಂಡು ನಾನು ಮತ್ತು ಚಾಸಾ-7 ರವರು ಸದರಿ ದಾಖಲೆಗೆ ಸಹಿ ಮಾಡಿರುತ್ತೇವೆಂದರೆ ಸರಿಯಲ್ಲ. ಪಂಚನಾಮೆ ಕಾಲಕ್ಕೆ ಪೋಲೀಸರು ಸದರಿ ಮೇಲ್ಕಂಡ ಪೋಟೋಗಳನ್ನು ತೆಗೆದಿರುತ್ತಾರೆಂದರೆ ಸರಿಯಲ್ಲ. ಸದರಿ ಪೋಟೋದಲ್ಲಿರುವಂತಹ ವಾಹನವನ್ನು ಅ ದಿನ ಪೋಲೀಸರು ನಮ್ಮ ಸಮಕ್ಷಮ ನಿಪಿ-5 ರಂತೆ ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹಾ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು. ಆರೋಪಿತರ ಪರ ವಕೀಲರಿಂದಃ- ಇಲ್ಲ

ಮರು ವಿಚಾರಣೆ ಇಲ್ಲಃ

(ಮುಕ್ತ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ,

ಸಿವಿಲ್ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ